# ಪ್ರತಿಯೊಬ್ಬರು ಗ್ರಾಹಕರಿಗಿರುವ ಹಕ್ಕುಗಳ ಮಾಹಿತಿ ಹೊಂದಬೇಕು-ನ್ಯಾ.ರಾಜೇಶ್ ಹೊಸಮನೆ



ಬಳ್ಳಾರಿ,ಮಾ.20.ವ್ಯವಹರಿಸುವವರು ಪ್ರತಿಯೊಬ್ಬರೂ ಗ್ರಾಹಕರು. ಗ್ರಾಹಕರು ತಮಗಿರುವ ಹಕ್ಕುಗಳ ಬಗ್ಗೆ ಮಾಹಿತಿ ಹೊಂದಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತಾ ಇಲಾಖೆ, ಶ್ರೀಮೇದಾ ಪದವಿಪೂರ್ವ ವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ "ಗ್ರಾಹಕರಿಗೋಸ್ಕರ ಗುಣಮಟ್ಟದ ಹಾಗೂ ಜವಾಬ್ದಾರಿಯುತ ಕೃತಕ ಬುದ್ಧಿ ಮತ್ತೆ" ಎಂಬ ಘೋಳವಾಕ್ಯದಡಿ ನಗರದ ಕೋಟೆ ಮುಖ್ಯ ರಸ್ತೆಯ ಶ್ರೀಮೇದಾ ಪದವಿಪೂರ್ವ ಕಾಲೇಜಿನ ಆಡಿಟೋರಿಯಂ ಹಾಲ್ನಿನಲ್ಲಿ ಬುಧವಾರ ಏರ್ಪಡಿಸಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯುಕ್ರಮುವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಆಧುನಿಕ ತಂತ್ರಜ್ಞಾನ ಅಭಿವೃದ್ಧಿಯಾದಂತೆ ನಾವು ಅದರ ಅನುಗುಣವಾಗಿ ಹೊಂದಿಕೊಳ್ಳುವುದು ಅನಿವಾರ್ಯವಾಗಿದೆ. ಆಬ್ಲೈನ್ ಅಥವಾ ಆವ್ಲಿಲೈಬ್ಬನಲ್ಲಿ ಗ್ರಾಹಕರು ತಾವು ಖರೀದಿಸುವ ವಸ್ತುಗಳ ಗುಣಮಟ್ಟ, ಪ್ರಮಾಣದ ಬಗ್ಗೆ ಗಮನಹರಿಸಬೇಕು ಎಂದರು.ಮುಂಬರುವ ದಿನಗಳಲ್ಲಿ ಕೃತಕ ಬುದ್ಧಿಮತ್ತೆಯು ವರ್ತಕರ ಹಾಗೂ ಗ್ರಾಹಕರ ಮಧ್ಯೆ ವಂಚನೆಯಾಗದಂತೆ ಕಾರ್ಯ ನಿರ್ವಹಿಸಲು ಅಭಿವೃದ್ಧಿ ಪಡಿಸುತ್ತಿದ್ದು, ಇದು ಸಹಕಾರಿಯಾಗಲಿದೆ ಎಂದು ತಿಳಿಸಿದರು.ತಂತ್ರಜ್ಞಾನ ಅಭಿವೃದ್ಧಿಯಾದಂತೆ, ಮಾನವ ರಹಿತ ಯಂತ್ರಗಳೂ ಕಾರ್ಯ ನಿರ್ವಹಿಸಬಹುದಾದಂತಹ ವಾತಾವರಣವು ಸೃಷ್ಟಿಯಾಗಲಿದೆ. ಇವುಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಇಲ್ಲದಿದ್ದಲ್ಲಿ ಮಾರಕವಾಗಬಹುದು ಎಂದು ಅಭಿಪ್ರಾಯ ಪಟ್ಟರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ತಿಪ್ಪೇಸ್ವಾಮಿ.ಎನ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ರಾಹಕರು ತಾವು ಕೊಂಡುಕೊಳ್ಳುವ ವಸ್ತುಗಳಲ್ಲಿ ಯಾವುದೇ ರೀತಿಯ ಮೋಸವಾದಾಗ ಮತ್ತು ತಮಗಾದ ಅನ್ಯಾಯದ ವಿರುದ್ಧ ಪ್ರಶ್ನಿಸುವ ಮನೋಭಾವನೆ ಬೆಳೆಸಿಕೊಂಡು, ತಮಗಿರುವ ಗ್ರಾಹಕರ ಹಕ್ಕುಗಳ ಪರವಾಗಿ ಧ್ವನಿಯೆತ್ತಿ ಕಾನೂನಾತ್ಮಕವಾಗಿ ನ್ಯಾಯ ಪಡೆದುಕೊಳ್ಳಬೇಕು ಎಂದರು.

ಅಭಿವೃದ್ಧಿ ಹೊಂದಿದ ತಂತ್ರಜ್ಞಾನದಲ್ಲಿ ಗ್ರಾಹಕರ ಹಕ್ಕುಗಳಿಗೆ ಚ್ಯುತಿ ಉಂಟಾದಾಗ ಇರುವ ಗ್ರಾಹಕರ ಹಕ್ಕುಗಳ ಬಗ್ಗೆ ಜನಸಾಮಾನ್ಯರಿಗೆ, ಸಾರ್ವಜನಕರಿಗೆ, ಗ್ರಾಹಕರಿಗೆ ಮಾಹಿತಿ ಒದಗಿಸುವ ಮೂಲಕ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ, ವರ್ತಕರಿಗೆ ತಿಳಿಸಿದರು.

ರಾವ್ ಬಹದ್ದೂರ್ ವೈ ಮಹಾಬಲೇಶ್ವರ ತಾಂತ್ರಿಕ ಇಂಜಿನಿಯರಿಂಗ್ ಮಹಾವಿದ್ಯಾಲಯದ ವಿಜ್ಞಾನ ಇಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಪಕರಾದ ಡಾ.ಶಿವಪ್ರಸಾದ.ಕೆ.ಎಂ ಅವರು "ಗ್ರಾಹಕರಿಗೋಸ್ಕರ ಗುಣಮಟ್ಟದ ಹಾಗೂ ಜವಾಬ್ದಾರಿಯುತ ಕೃತಕ ಬುದ್ಧಿ ಮತ್ತೆ" ಎಂಬ ವಿಳಯದ ಕುರಿತು ವಿಶೇಳ ಉಪನ್ಯಾಸದಲ್ಲಿ ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಜಗತ್ತು ತಂತ್ರಜ್ಞಾನದ ಅಭಿವೃದ್ಧಿಯಿಂದ ಕೃತಕ ಬುದ್ಧಿಮತ್ತೆಯು ಅವಲಂಬನೆಗೊಳ್ಳುತ್ತಿದ್ದು, ನ್ಯಾಯಬೆಲೆ ಅಂಗಡಿಗಳಲ್ಲಿ ಉಪಯೋಗಿಸುವುದರಿಂದ ನಿಖರ ತೂಕದ ಜೊತೆಗೆ ನಗದಿತ ಸಮಯವನ್ನು ಉಳಿಸಬಹುದು ಎಂದು ತಿಳಿಸಿದರು.

ಹಿರಿಯ ವಕೀಲರಾದ ಎನ್.ಪ್ರಕಾಶ್ ಅವರು, "ಪ್ರಸ್ತುತ ದಿನಗಳಲ್ಲಿ ಗ್ರಾಹಕರ ಹಕ್ಕುಗಳ ಹಾಗೂ ಜವಾಬ್ದಾರಿಗಳು" ಎಂಬ ವಿಳಯದ ಕುರಿತು ಉಪನ್ಯಾಸದಲ್ಲಿ ಮಾತನಾಡಿ, ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ಸುರಕ್ಷಿತ ಹಕ್ಕು, ಮಾಹಿತಿ ಹಕ್ಕು, ಆಯ್ಕೆಯ ಹಕ್ಕು, ಕೊಂಡುಕೊಳ್ಳುವ ಹಕ್ಕು, ಗ್ರಾಹಕರ ಶಿಕ್ಷಣದ ಹಕ್ಕುಗಳ ಕುರಿತು ಮಾಹಿತಿ ತಿಳಿದುಕೊಳ್ಳುವುದು ಅಗತ್ಯವಾಗಿದೆ.

ಗ್ರಾಹಕರ ಕುಂದು ಕೊರತೆಯ ಸಮಸ್ಯೆಗಳನ್ನು ನಿಖರವಾದ ಮಾಹಿತಿಯೊಂದಿಗೆ ಗ್ರಾಹಕರ ವ್ಯಾಜ್ಯಗಳ ಪರಿಹಾರ ಕೇಂದ್ರದಲ್ಲಿ ಕಾನೂನಾತ್ಮಕವಾಗಿ ಪರಿಹಾರ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯೆಯಾದ ಮಾರ್ಲಾ ಶಶಿಕಲಾ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕೆ.ಎರ್ರಿಗೌಡ, ಹಿರಿಯ ವಕೀಲರಾದ ಅಂಕಲಯ್ಯ, ಶ್ರೀಮೇದಾ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ರಾಮಕಿರಣ, ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಅಮೃತಾ.ಪಿ.ಚವ್ಹಾಣ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನಾ ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ನ್ಯಾಯಬೆಲೆ ಅಂಗಡಿಯ ಮಾಲೀಕರು ಹಾಗೂ ಮತ್ತೀತರರು ಉಪಸ್ಥಿತರಿದ್ದರು.ಕಾರ್ಯಕ್ರಮದಲ್ಲಿ ತೂಕ ಮತ್ತು ಅಳತೆ ಕುರಿತ ವಂಚನೆಯ ಜಾಗೃತಿ ಅರಿವು ಮೂಡಿಸಲಾಯಿತು.

# ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

ಬೆಳಗಾವಿ-: ಯಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಳ್ಳೂರು ಮತ್ತು ಅವಚರಹಟ್ಟಿ ಗ್ರಾಮಗಳಲ್ಲಿ ಎಂಎನ್‌ಆರ್‌ಇಜಿಎ ವತಿಯಿಂದ ಶ್ರಮಿಸುತ್ತಿರುವ ಮಹಿಳೆಯರನ್ನು ಸನ್ಮಾನಿಸಲು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತರಿ ಯೋಜನೆಯಡಿ (MGNREGA) ಉದ್ಯೋಗದಲ್ಲಿರುವ ಮಹಿಳೆಯರಿಗೆ ಯೆಲ್ಲೂರು ಪಂಚಾಯತ್‌ನಿಂದ ಮಹಿಳಾ ದಿನಾಚರಣೆಯನ್ನು ಆಚರಿಸಲು ಪಂಚಾಯತ್ ಅಧಿಕಾರಿಗಳು ಕೆಲಸದ ಸ್ಥಳಕ್ಕೆ ಬಂದರು.

ಮಧ್ಯಾಹ್ನ ಊಟದ ವೇಳೆ ಯಳ್ಳೂರು ಗ್ರಾ.ಪಂ.ಪಿಡಿಒ ಮೇಡಂ, ಮಹಿಳಾ ಗ್ರಾ.ಪಂ.ಸದಸ್ಯರು ಹಾಗೂ ನೌಕರರು ಎಲ್ಲ ಮಹಿಳೆಯರೊಂದಿಗೆ ಕೇಕ್ ಕತ್ತರಿಸುವ ಮೂಲಕ ಮಹಿಳಾ ದಿನಾಚರಣೆ ಆಚರಿಸಿದರು. ಈ ಸಂದರ್ಭದಲ್ಲಿ ಪಿಡಿಒ ಮೇಡಂ ಮಹಿಳಾ ದಿನಾಚರಣೆ ಕುರಿತು ಸಂಕ್ಷಿಪ್ತ ಮಾಹಿತಿ ನೀಡಿದರು. ಇದೇ ವೇಳೆ ಎಲ್ಲ ಮಹಿಳೆಯರಿಗೆ 'ಮಜ್ದೂರ್ ನವನಿರ್ಮಾಣ ಸಂಘ'ದ ಪರವಾಗಿ ರಾಹುಲ್ ಪಾಟೀಲ್ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಸದಾನಂದ ಮರಾಠೆ, ನಿರ್ಮಲಾ ಬರಸ್ಕಳೆ, ಶೋಭಾ ಕುಂಡೇಕರ, ಮೀನಾ ಕುಂಡೇಕರ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಉಪಸ್ಥಿತರಿದ್ದರು.

# ನಾರಾ ಭರತ್ ರೆಡ್ಡಿಯ ಟಚ್ ಫಾರ್ ಲೈಫ್ ಫೌಂಡೇಶನ್ ವತಿಯಿಂದ ಬಳ್ಳಾರಿ ನಗರದಲ್ಲಿ ಟ್ಯಾಂಕರ್ ಮೂಲಕ ನೀರು ವಿತರಣೆಗೆ ಚಾಲನೆ



ಬಳ್ಳಾರಿ, ಮಾ-: ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಸಂಸ್ಥಾಪಿಸಿರುವ ಟಚ್ ಫಾರ್ ಲೈಫ್ ಫೌಂಡೇಶನ್ ವತಿಯಿಂದ ಬಳ್ಳಾರಿ ನಗರದಾದ್ಯಂತ ವಾರ್ಡ್ ಗಳಿಗೆ ಕುಡಿಯುವ ನೀರು ಪೂರೈಸಲು ಬುಧವಾರ ನಗರದ ನಳಂದ ಕಾಲೇಜು ಆವರಣದಲ್ಲಿ ಟ್ಯಾಂಕರ್ ಗಳಿಗೆ ಚಾಲನೆ ನೀಡಲಾಯಿತು. ಬಳ್ಳಾರಿ ಬ್ರೂಸ್ ಪೇಟೆ ಹಾಗೂ ಕಂಟೋನ್ಮೆಂಟ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಹುಸೇನ್ ಪೀರಾಂ ಹಾಗೂ ಕೆ.ಎಂ.ಅಭಿಲಾಶ್ ಅವರು ಟ್ಯಾಂಕರ್ ಗಳಿಗೆ ಚಾಲನೆ ನೀಡಿದರು. ಈ ವೇಳೆ ಅವರನ್ನು ಸನ್ಮಾನಿಸಲಾಯಿತು.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆಗೊಳಿಸಿರುವ ಶಾಸಕ ನಾರಾ ಭರತ್ ರೆಡ್ಡಿ; ಬಿಸಿಲಿನ ಬೇಗೆ ಹೆಚ್ಚುತ್ತಿದೆ. ಈ ವರ್ಷ ಮಳೆಯ ಪ್ರಮಾಣವೂ ಕಡಿಮೆಯಾಗಿ ತುಂಗಭದ್ರಾ ಜಲಾಶಯದಲ್ಲಿ ಸಾಕಷ್ಟು ನೀರಿಲ್ಲ. ಹೀಗಿದ್ದರೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು ಹಾಗೂ ಜಿಲ್ಲಾಡಳಿತ ನನ್ನ ಮನವಿಯನ್ನು ಪುರಸ್ಕರಿಸಿ, ನಗರಕ್ಕೆ ಬೇಕಾದ ಸಮರ್ಪಕ ಕುಡಿಯುವ ನೀರನ್ನು ಒದಗಿಸಲು ಸಹಕಾರ ನೀಡಿರುತ್ತಾರೆ. ಆದಾಗ್ಯೂ ಕೂಡ ವಾರ್ಡ್ ಗಳಲ್ಲಿ ನೀರಿನ ಕೊರತೆ ಉಂಟಾಗಿರುವುದು ನನ್ನ ಗಮನಕ್ಕೆ ಬಂದಿದ್ದು, ನಗರದ ಪ್ರತಿ ವಾರ್ಡಿಗೂ ಅಗತ್ಯ ಇರುವ ಕಡೆಗಳಲ್ಲಿ ಇಂದಿನಿಂದ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ತಲುಪಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ 28 ವಾರ್ಡ್ ಗಳಿಗೆ ನೀರು ಪೂರೈಸಲು ಅಗತ್ಯ ಟ್ಯಾಂಕರ್ ಗಳ ವ್ಯವಸ್ಥೆಯನ್ನು ಮಾಡಲಾಗಿದ್ದು ನೀರಿನ ಅಗತ್ಯವಿರುವವರು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವಂತೆ ಅವರು ವಿನಂತಿಸಿದ್ದಾರೆ.

ಟ್ಯಾಂಕರ್ ಗಳಿಗೆ ಚಾಲನೆ ನೀಡಿದ ವೇಳೆ ಕಾಂಗ್ರೆಸ್ ಮುಖಂಡರಾದ ಹೊನ್ನಪ್ಪ, ಹಗರಿ ಗೋವಿಂದ, ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಚಾನಾಳ್ ಶೇಖರ್, ಶಾಸಕರ ಆಪ್ತರಾದ ಟಿಲ್ಲು, ಎಸ್ಟಿಡಿ ಮಂಜು, ಅರ್ಷದ್, ಧರ್ಮಶ್ರೀ, ಮೋಕ ನಾಗರಾಜ, ವಿಶ್ವನಾಥ ನಾಯಕ್, ಸೀನಾ, ಅಶೋಕ್ ರೆಡ್ಡಿ, ಬೆಣಕಲ್ ರಘು, ಕೆ.ಶಿವಕುಮಾರ್, ಶಿವು, ಕಗ್ಗಲ್ ಮಂಜುನಾಥ ಸೇರಿದಂತೆ ಹಲವರು ಹಾಜರಿದ್ದರು.

# ಆರೋಗ್ಯ ಕೇಂದ್ರದ ಸಿಬ್ಬಂದಿಗಳಿಗೆ ಚುನಾವಣಾ ಪ್ರತಿಜ್ಞಾ ವಿಧಿ



ಮೂಡಲಗಿ: ಅರಭಾವಿ ಮತಕ್ಷೇತ್ರದಲ್ಲಿ ಗ್ರಾಮೀಣ ಭಾಗಕ್ಕಿಂತ ಪಟ್ಟಣ ಪ್ರದೇಶದಲ್ಲಿ ಕೆಲ ಮತಗಟೆಗಳಲ್ಲಿ ಕಡಿಮೆ ಮತದಾನ ಕಡಿಮೆಯಾಗಿದ್ದು ಅಂತಹ ಮತಗಟೆಗಳಲ್ಲಿ ಹೆಚ್ಚಿನ ಮತದಾನದ ಅರಿವು ಮೂಡಿಸಲ್ಲಾಗುತ್ತಿದೆ ಎಂದು ಮೂಡಲಗಿ ತಾಪಂ ಇಒ ಹಾಗೂ ಅರಭಾವಿ ಕ್ಷೇತ್ರದ ಸ್ವೀಪ್ ಸಮಿತಿ ಅಧ್ಯಕ್ಷ ನವೀನಪ್ರಸಾದ ಕಟ್ಟಿಮನೆ ಹೇಳಿದರು.

ಬುಧುವಾರದಂದು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮುಂಭಾಗದಲ್ಲಿ ಆರೋಗ್ಯ ಕೇಂದ್ರದ ಸಿಬ್ಬಂದಿಗಳಿಗೆ ಚುನಾವಣಾ ಪ್ರತಿಜ್ಞಾ ವಿಧಿಯನ್ನು ಬೋಧಿಸಿ ಮತನಾಡಿದ ಅವರು, ನಮ್ಮ ಮತ ನಮ್ಮ ಹಕ್ಕು ಪ್ರಜಾಪ್ರಭುತ್ವವನ್ನು ಬಲಪಡಿಸಲು ಯುವ ಜನತೆ ಚುನಾವಣಾ ಪ್ರಕ್ರಿಯೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು, ಪ್ರತಿಯೊಬ್ಬ ಪ್ರಜೆಯು ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನದ ಮಾಡುವ ಮೂಲಕ ಮತದ ಮಹತ್ವವನ್ನು ಕಾಪಾಡಬೇಕೆಂದು.

ಈ ಸಂದರ್ಭದಲ್ಲಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಭಾರತಿ ಕೋಣಿ, ಡಾ ದೀಪಾ ಮಾಚಪನ್ನವರ, ಮಹಿಳಾ ಆಪ್ತ ಸಮಾಲೋಚಕಿ ಲತಾ ನಾಯಕ್, ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಇದ್ದರು.

# ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗೆಲ್ಲಾ ಬರಗಾಲ ಬರುತ್ತೆ



ಯಡಿಯೂರಪ್ಪನವರು ಮುಖ್ಯಮಂತ್ರಿಯಾದಾಗ ಮಳೆ ನಲ್ಲಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತಿದ್ದೇವು ಲೋಕಸಭಾ ಅಭ್ಯರ್ಥಿ ಬಿ ಶ್ರೀರಾಮುಲು

ಬಳ್ಳಾರಿ ಮಾ 20. ನನ್ನ 35 ವರ್ಷಗಳ ರಾಜಕೀಯ ಜೀವನದಲ್ಲಿ ಕಳೆದ ಬಾರಿ ಬಳ್ಳಾರಿ ಗ್ರಾಮಾಂತರ ಕ್ಷೇತ್ರದಿಂದ ಸೋಲಾಗಿ ನನಗೆ ಅವಮಾನವಾಯಿತು, ಪುನಃ ಅದೇ ಕ್ಷೇತ್ರದ ಜನಗಳ ಆಶೀರ್ವಾದಿಂದ ಅತಿ ಹೆಚ್ಚು ಮತಗಳ ಬಹುಮತದಿಂದ ನನಗೆ ಲೋಕಸಭಾ ಚುನಾವಣೆಯಲ್ಲಿ ಗೆಲ್ಲಿಸುವುದರ ಮೂಲಕ ನಿಮ್ಮಿಂದಲೇ ಸನ್ಮಾನವಾಗಬೇಕು ಎಂದು ಮಾಜಿ ಸಚಿವರು ಹಾಗೂ ಲೋಕಸಭಾ ಕ್ಷೇತ್ರದ ಬಳ್ಳಾರಿ ಅಭ್ಯರ್ಥಿ ಬಿ.ಶ್ರೀರಾಮುಲುರವರು ಮಾತನಾಡಿದರು. ನಗರದ ತಾಳೂರು ರಸ್ತೆಯ ಗೋವಿಂದಪ್ಪ ಕಲ್ಯಾಣ ಮಂಟಪದಲ್ಲಿ ಬಳ್ಳಾರಿ ಲೋಕಸಭಾ ಕ್ಷೇತ್ರದ ಬಳ್ಳಾರಿ ಗ್ರಾಮಾಂತರ ಹಾಗೂ ಕೌಲ್ ಬಜಾರ್ ಮಂಡಲಗಳ ಬೂತ್ ಮಟ್ಟದ ವಿಜಯ ಅಭಿಯಾನದ ಸಭೆಯಲ್ಲಿ ಅವರು ಭಾಗವಹಿಸಿ ಮಾತನಾಡಿದರು.

ಇವತ್ತು ಯಾವ ಕ್ಷೇತ್ರದಿಂದ ನನಗೆ ಸೋಲಾಗಿತ್ತೋ ಆದೇ ಕ್ಷೇತ್ರದಿಂದ ಲೋಕಸಭಾ ಚುನಾವಣಾ ಪ್ರಚಾರ ಕಾರ್ಯಕ್ರಮ ಆರಂಭಿಸಿದ್ದೇನೆ ಎಲ್ಲಿ ಕಳೆದುಕೊಂಡಿದ್ದೇನೋ ಅಲ್ಲಿ ಹುಡುಕುವ ಕೆಲಸ ಪ್ರಾಮಾಣಿಕವಾಗಿ ಮಾಡುತ್ತೇನೆ, ಇದು ಕೇವಲ ಶ್ರೀರಾಮುಲು ಅವರ ಚುನಾವಣೆ ಅಲ್ಲ, ಮೋದಿಯಾವರ ದೇಶೋದ್ಧಾರದ ಚುನಾವಣೆ ಕಳೆದ 35 ವರ್ಷಗಳಿಂದ ನೀವು ನನಗೆ ರಾಜಕೀಯ ಜೀವನ ಕಟ್ಟಿಕೊಟ್ಟಿದ್ದೀರಿ, ನಮ್ಮ ಋಣ ಈ ಜನ್ಮದಲ್ಲಿ ನಾನು ತೀರಿಸಲಾರೆ, ನೀವು ಬೆಳೆಸಿದ ಈ ಶ್ರೀರಾಮುಲು ಇವತ್ತು ಈ ಮಟ್ಟಕ್ಕೆ ಬೆಳೆದಿದ್ದಾನೆ ಎಂದರೆ ನಮ್ಮ ಆಶೀರ್ವಾದದಿಂದ, ಈ ಬಾರಿ ಅತಿ ಹೆಚ್ಚು ಬಹುಮತದೊಂದಿಗೆ ನಮ್ಮ ಆಶೀರ್ವಾದದಿಂದ ನನ್ನನ್ನು ಗೆಲ್ಲಿಸಬೇಕು ಗ್ರಾಮಾಂತರ ಕ್ಷೇತ್ರದಿಂದ ನನ್ನನ್ನು ಸೋಲಿಸಿದವರ ವಿರುದ್ಧ ಸೇಡು ತೀರಿಸಿಕೊಳ್ಳಬೇಕು ಆವಾಗ ನನ್ನ ನೋವು ಕಡಿಮೆಯಾಗುತ್ತದೆ ನೀವು ಪ್ರತಿ ಬೂತ್ ಗಳಲ್ಲಿ ಕೆಲಸ ಮಾಡಿದರೆ ಮೋದಿಯ ಕಾರ್ಯಗಳನ್ನು ಜನರಿಗೆ ತಿಳಿಸಿದರೆ ಕಾರ್ಯಕರ್ತರು ಒಗ್ಗಟ್ಟಾಗಿ ಕಾರ್ಯನಿರ್ವಹಿಸಿದರೆ ಈ ನಮ್ಮ ಶ್ರೀರಾಮುಲು ಗೆದ್ದಂತೆ. ನನಗೆ ರಾಜಕೀಯ ಜನ್ಮ ಕೊಟ್ಟ ಗ್ರಾಮಾಂತರ ಕ್ಷೇತ್ರದ ಜನರಿಗೆ ಇವತ್ತು ಗ್ಯಾರಂಟಿ ಬಿಡಿ. ಕನಿಷ್ಠ ಮೂಲಭೂತ ಸೌಕರ್ಯಗಳೇ ಸಿಗುತ್ತಿಲ್ಲ. ಗ್ರಾಮಾಂತರ ಪ್ರದೇಶದ ಜೋಳದರಾಶಿ. ಕಾರೇಕಲ್ಲು, ವೀರಾಪುರ, ಯಾಲ್ಪಿ ಕುಂಟನಾಹಾಳ್, ಹೊನ್ನಾಳಿ, ತಾಂಡಗಳಲ್ಲಿ ಜನರಿಗೆ ಸರಿಯಾದ ಕುಡಿಯುವ ನೀರಿಲ್ಲ ಈ ಕಾಂಗ್ರೆಸ್‌ನವರು ಯಾವಾಗಲೂ ಅಧಿಕಾರಿಕ್ಕೆ ಬರಲಿ ಅವಗೆಲ್ಲ ಬರಗಾಲ ಇರುತ್ತೆ.

ನಮ್ಮ ಯಡಿಯೂರಪ್ಪನವರು ಯಾವಾಗಲೂ ಮುಖ್ಯಮಂತ್ರಿಯಾಗಲಿ ಮಳೆರಾಯ ನಲ್ಲಲ್ಲ ಆದರೆ ನಾವು ಮಳೆ ನಲ್ಲಲಿ ಎಂದು ಪ್ರಾರ್ಥಿಸುತ್ತಿದ್ದೆವು, ಅದರೆ ಬಿಜೆಪಿ ಸರಕಾರ ರಾಜ್ಯದಲ್ಲಿ ಯಾವಾಗಲು ಅಧಿಕಾರಕ್ಕೆ ಬರಲಿ ಅವಗೇಲ್ಲ ಉತ್ತಮ ಮಳೆ ಬೆಳೆ ಆಗ್ತಾಯಿತ್ತು ಎಂದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಳತ್‌ನ ಮುಖ್ಯ ಸಚೇತಕರು ಹಾಗೂ ಬಳ್ಳಾರಿ ಚುನಾವಣಾ ಉಸ್ತುವಾರಿ ರವಿಕುಮಾರ್. ವಿಧಾನ ಪರಿಳತ್ ಸದಸ್ಯರಾದ ವೈ.ಎಂ.ಸತೀಶ್, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ಬಿಜೆಪಿ ಮುಖಂಡರಾದ ಕೆ.ಎ.ರಾಮಲಿಂಗಪ್ಪ, ಗುರುಲಿಂಗನಗೌಡ, ಓಬಳೇಶ್, ಗುತ್ತಿಗೆನೂರು ವಿರೂಪಾಕ್ಷಗೌಡ, ಮುರಹರಿಗೌಡ, ಹನುಮಂತಪ್ಪ, ಸೋಮನಗೌಡ, ಡಾ.ಅರುಣ, ನೂರ್ ಬಾಳ, ಕೌಲ್ ಬಜಾರ್ ಮಂಡಲ ಅಧ್ಯಕ್ಷ ನಾಗರಾಜ್ ರೆಡ್ಡಿ, ಪಾಲಿಕೆ ಸದಸ್ಯ ಎಂ.ಗೋವಿಂದರಾಜುಲು, ರೆಡಿಯೋ ಪಾರ್ಕ್ ಎ.ಎಂ.ಸಂಜಯ್, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಕಾಮಿಡಿ ಕಿಲಾಡಿಗಳು ಮಹಾ ಆಡಿಶನ್




ಬಳ್ಳಾರಿ ಮಾ -: ತನ್ನ ವಿಭಿನ್ನ ರಿಯಾಲಿಟಿ ಶೋಗಳ ಮೂಲಕ ಕರುನಾಡನ್ನ ರಂಜಿಸುತ್ತ ಬಂದಿರುವ ಜೀ ಕನ್ನಡ ವಾಹಿನಿಯು, ಈಗ ತನ್ನ ಹಿಟ್ ರಿಯಾಲಿಟಿ ಶೋಗಳಾದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಕಾಮಿಡಿ ಕಿಲಾಡಿಗಳನ್ನ ಮತ್ತೆ ತೆರೆಗೆ ತರಲು ತಯಾರಿ ನಡೆಸಿದೆ. 7 ಸೀಸನ್ ಗಳನ್ನ ಯಶಸ್ವಿಯಾಗಿ ಪೂರೈಸಿರುವ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಈಗ ತನ್ನ 8 ನೇ ಆವೃತಿಯೊಂದಿಗೆ ಮತ್ತೆ ಕರುನಾಡನ್ನ ಕುಣಿಸಲು ತಯಾರಾಗಿದೆ.

ಈಗಾಗಲೇ ಸಾಕಳ್ಟು ಯುವ ನೃತ್ಯ ನಿರ್ದೇಶಕರನ್ನ ಸ್ಯಾಂಡಲ್ ವುಡ್ಡಿಗೆ ನೀಡಿರುವ ಈ ರಿಯಾಲಿಟಿ ಶೋ ಮತ್ತಳ್ಟು ನೃತ್ಯ ನಿರ್ದೇಶಕರನ್ನ ಹುಟ್ಟು ಹಾಕುವ ಕೆಲಸವನ್ನ ಈ ಆವೃತ್ತಿಯಲ್ಲಿ ಮತ್ತೆ ಮಾಡಲಿದೆ.

ಇದರ ಜೊತೆಜೊತೆಗೆ ಸತತ 4 ಹಿಟ್ ಸೀಸನ್ನುಗಳನ್ನ ಕೊಟ್ಟಿರುವ ಕರುನಾಡಿನ ನೆಚ್ಚಿನ ರಿಯಾಲಿಟಿ ಶೋಗಳಲ್ಲಿ ಒಂದಾದ ಕಾಮಿಡಿ ಕಿಲಾಡಿಗಳು ಈಗಾಗಲೇ ಸಾಕಳ್ಟು ಕಾಮಿಡಿ ಕಲಾವಿದರನ್ನ ಕರುನಾಡಿಗೆ ನೀಡಿರುವುದು ಈಗ ಇತಿಹಾಸ.ವೇದಿಕೆಗಾಗಿ ಕಾಯುತಿರುವ ಅದೆಳ್ಟೋ ಹಾಸ್ಯ ನಟನಟಿಯರ ಕನಸನ್ನ ನನಸು ಮಾಡುತ್ತಿರುವ ಈ ರಿಯಾಲಿಟಿ ಶೋ ಈ ಬಾರಿ ಕಾಮಿಡಿ ಕಿಲಾಡಿಗಳು ಪ್ರೀಮಿಯರ್ ಲೀಗ್ ಎಂಬ ಹೊಸ ರೂಪದಲ್ಲಿ ಕರುನಾಡಿನ ಮುಂದೆ ಬರಲಿದೆ. ಈ ಹಂತದಲ್ಲಿ ಇದಕ್ಕೆ ಪೂರ್ವಬಾವಿ ತಯಾರಿ ಎಂಬಂತೆ ಆಡಿಳನ್ ಪ್ರಕ್ರಿಯೇ ಕರುನಾಡಿನಾದ್ಯಂತ ಶುರುವಾಗಿದೆ. ಇದೇ ಮಾರ್ಚ್ 22 ರಂದು ಶುಕ್ರವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ರವರೆಗೆ ಇಂಟರ್ ನ್ಯಾಳನಲ್ ಡೆಲ್ಲಿ ಪಬ್ಲಿಕ್ ಸ್ಕೂಲ್,ಪಾರ್ವತಿ ನಗರ, ಬಳ್ಳಾರಿ. ಇಲ್ಲಿ ಆಡಿಳನ್ ನಡೆಯಲಿದೆ. ಆಡಿಳನಲ್ಲಿ ಭಾಗವಹಿಸಲು ಇಚ್ಚಿಸುವವರು ಅಡ್ರಸ್ ಪ್ರೂಫ್ ಜೆರಾಕ್ಸ್ ಜೊತೆ ಎರಡು ಪಾಸ್ ಪೋರ್ಟ್ ಸೈಜ್ ಪೋಟೊದೊಂದಿಗೆ ಆಡಿಳನ್ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದ್ದು,ಜೀ ಕನ್ನಡ ವಾಹಿನಿಯು ಈ ಆಡಿಳನ್ಗೆ ಯಾವುದೇ ಶುಲ್ಕ ವಿಧಿಸಿರುವುದಿಲ್ಲವೆಂದು ಸ್ವಳ್ಟ ಪಡಿಸಿದೆ ಹಾಗು ವಾಹಿನಿಯ ಹೆಸರಲ್ಲಿ ಹಣ ಕೇಳುವವರ ವಿರುದ್ಧ ಶಿಸ್ತು ಕ್ರಮ ಜರುಗಿಸುವುದಾಗಿ ತಿಳಿಸಿದೆ.

# ಮೂಡಲಗಿ: ಲೋಕ ಅದಾಲತ್‌ದಲ್ಲಿ 1636 ಪ್ರಕರಣಗಳನ್ನು ಇತ್ಯರ್ಥ



ಮೂಡಲಗಿ: ವಿವಿಧ ಪ್ರಕರಣಗಳಲ್ಲಿ ನ್ಯಾಯಾಲಯ ಮೆಟ್ಟಿಲು ಏರಿರುವರು ರಾಜಿ ಸಂದಾನ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡರೆ ಇಬ್ಬರಿಗೂ ಗೆಲ್ಲುವು ಸಿಗುವುದರೊಂದಿಗೆ ಸಹಬಾಳ್ವೇಯಿಂದ ಜೀವನ ನಡೆಸಲ್ಲು ಸಾಧ್ಯ ಎಂದು ಪಟ್ಟಣದ ದಿವಾಣಿ ಹಾಗೂ ಜೆ.ಎಮ್.ಎಫ್.ಸಿ ನ್ಯಾಯಾಧೀಶರಾದ ಜ್ಯೋತಿ ಪಾಟೀಲ ಅವರು ಹೇಳಿದರು. ಅವರು ಪಟ್ಟಣದ ದಿವಾಣಿ ಮತ್ತು ಜೆಎಮ್‌ಎಫ್‌ಸಿ ನ್ಯಾಯಾಲಯದಲ್ಲಿ ಇತ್ತೀಚೆಗೆ ಜರುಗಿದ, ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಮಾತನಾಡಿ, ನ್ಯಾಯಾಂಗ ವ್ಯವಸ್ಥೆಯಲ್ಲಿ ಪ್ರತಿ ಮೂರು ತಿಂಗಳಗೊಮ್ಮೆ ನಡೆಯುವ ಲೋಕ್ ಅದಾಲತ್ತಿನಲ್ಲಿ ಪ್ರಕರಣಗಳನ್ನು ಇತ್ಯರ್ಥ ಪಡಿಸುವದರಿಂದ ಸಮಯ ಹಾಗೂ ಹಣವನ್ನು ಉಳಿಸಿಕೊಳ್ಳಬಹುದು ಎಂದರು.

ಲೋಕ ಅದಾಲತದಲ್ಲಿ ನ್ಯಾಯಾಲಯದಲ್ಲಿನ ಒಟ್ಟು 1636 ಪ್ರಕರಣಗಳನ್ನು ಇತ್ಯರ್ಥಗೊಳಿಸಿದರು. 1494 ಕ್ರೀಮಿನಲ್ ಪ್ರಕರಣಗಳಲ್ಲಿ 1 ಕೋಟಿ 50 ಲಕ್ಷ ರೂ ಹಾಗೂ ಸಿವಿಲ್ ಹಾಗೂ ಚೆಕ್ ಬೌನ್ಸ್ ಪ್ರಕರಣದ ಒಟ್ಟು 72 ಇದರಲ್ಲಿ ಇತ್ಯರ್ಥ ಮಾಡಿಕೊಂಡು ಒಟ್ಟು ಸುಮಾರು ರೂ 77 ಲಕ್ಷ ರೂಪಾಯಿ ಬರಣಾ ಮಾಡಿಸಿದರು.

8 ದಾಂಪತ್ಯ ಜೀವನದ ಪ್ರಕರಣಗಳು, 62 ಜನ್ಮ ಮತ್ತು ಮರಣ ಪ್ರಮಾಣ ಪತ್ರಗಳ ಪ್ರಕರಣಗಳನ್ನು ನ್ಯಾಯಾಧೀಶರಾದ ಜ್ಯೋತಿ ಪಾಟೀಲ ಅವರು ಇತ್ಯರ್ಥಗೊಳಿಸಿದರು,

ಈ ಸಂದರ್ಭದಲ್ಲಿ ಸರಕಾರಿ ವಕೀಲರಾದ ಶುಭ, ವಕೀಲರಾದ ವಿನೋಧ ಪಾಟೀಲ, ಜಿ.ಎಸ್.ಸಿದ್ದಾಪೂರಮಠ, ಎಸ್.ವಾಯ್.ಹೊಸಟ್ಟಿ, ಎಸ್.ಜಿ.ಕುಲಕರ್ಣಿ, ಎಸ್.ಬಿ.ತುಪ್ಪದ, ರಮೇಶ ಮಮದಾಪೂರ, ಅಶೋಕ ಬಾಗೋಜಿ, ವಿ.ವಿ.ನಾಯಕ, ಆರ್.ಬಿ.ಕುಳ್ಳೂರ, ಎಲ್.ಬಿ.ವಡ್ಡೇಯರ, ಬಿ.ಎಚ್.ಮಳಿವಡ್ಡೇರ, ಡಿ.ಎಸ್.ರೋಡನ್ನವರ, ವಿ.ಸಿ.ಗಾಡವಿ, ಸುರೇಶ ಸಣ್ಣಕ್ಕಿ, ಎಲ್.ಎಮ್.ಸವಸುದ್ದಿ, ವಿವೇಕ ಸೋನವಾಲಕರ, ಅಕ್ಕಮಹಾದೇವಿ ಗೋಡ್ಯಾಗೋಳ, ಜ್ಯೋತಿ ಕೊಡತೆ, ನ್ಯಾಯವಾದಿಗಳ ಸಂಘದ ಪದಾಧಿಕಾರಿಗಳು ಹಾಗೂ ನ್ಯಾಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು